# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1110 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21.09.2021 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ. | ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖಾ ವತಿಯಿಂದ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಈ ಯೋಜನೆಗಳ ವಿವರವನ್ನು ಅನುಬಂಧ-01ರಲ್ಲಿ ಲಗತ್ತಿಸಿದೆ. |
| ಆ | ಅಸಹಾಯಕ ಹಿರಿಯ ನಾಗರಿಕರಿಗಾಗಿ ಎಷ್ಟು ವೃದ್ಧಾಶ್ರಮಗಳನ್ನು ಸರ್ಕಾರ ನಡೆಸುತ್ತಿದೆ (ಪ್ರತಿ ಜಿಲ್ಲೆಗಳ ಮಾಹಿತಿ ನೀಡುವುದು) | • ನಿರ್ಗತಿಕ ವೃದ್ಧರಿಗಾಗಿ ರಾಜ್ಯ ಸರ್ಕಾರದಿಂದ 30 ಜಿಲ್ಲೆಗಳಲ್ಲಿ 26 ಹಾಗೂ ಕಂದಾಯ ಉಪ ವಿಭಾಗಗಳಲ್ಲಿ 09 ವೃದ್ಧಾಶ್ರಮಗಳನ್ನು ನಡೆಸಲಾಗುತ್ತಿದೆ.<br>• ಕೇಂದ್ರ ಸರ್ಕಾರದಿಂದ ಒಟ್ಟು 49 ವೃದ್ಧಾಶ್ರಮಗಳನ್ನು ನಡೆಸಲಾಗುತ್ತಿದೆ. ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |
| ಇ | ಹಿರಿಯ ನಾಗರಿಕರ ಮನೋವಿಕಾಸಕ್ಕಾಗಿ, ಮನರಂಜನೆಗಾಗಿ ಸರ್ಕಾರ ಏನಾದರೂ ಕಾರ್ಯಕ್ರಮ ಹಾಕಿಕೊಂಡಿದೆಯೇ? (ವಿವರ ನೀಡುವುದು) | • ಹಿರಿಯ ನಾಗರಿಕರ ಮನೋವಿಕಾಸಕ್ಕಾಗಿ, ಮನರಂಜನೆಗಾಗಿ ಇಲಾಖಾ ವತಿಯಿಂದ ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಿರ್ವಹಿಸಲಾಗುತ್ತಿದೆ. ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ಹಗಲು ವೇಳೆಯಲ್ಲಿ ಕುಟುಂಬದಲ್ಲಿ ನೋಡಿಕೊಳ್ಳಲು ಯಾರು ಇಲ್ಲದದಂತಹ ಹಿರಿಯ ನಾಗರಿಕರು ತಮ್ಮ ವೇಳೆಯನ್ನು ಸದುಪಯೋಗಪಡಿಸಿಕೊಳ್ಳಲು ಹಾಗೂ ಸಾಮಾಜಿಕವಾಗಿ ತಮ್ಮ ವಯೋಮಾನದವರೊಂದಿಗೆ ಓದು, ಆಟ ಮುಂತಾದ ಚಟುವಟಿಕೆಗಳಲ್ಲಿ ನಿರತರಾಗಿ ಸಂತೋಷವಾಗಿ ಕಾಲಕಳೆಯಲು ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಈ ಕೇಂದ್ರದ ಸೌಲಭ್ಯವನ್ನು ಪಡೆಯಬಹುದಾಗಿದೆ.<br>• ವೃದ್ಧಾಶ್ರಮಗಳಲ್ಲೂ ಸಹ ಹಿರಿಯ ನಾಗರಿಕರ ಮನೋವಿಕಾಸಕ್ಕಾಗಿ ಮನೋರಂಜನೆ ಕಾರ್ಯಕ್ರಮಗಳನ್ನು ವಿವಿಧ ಚಟುವಟಿಗಳನ್ನು ನಡೆಸಲಾಗುತ್ತದೆ. ಓದಲು ವೃತ್ತ ಪತ್ರಿಕೆ, ವಾರ ಪತ್ರಿಕೆ ಒದಗಿಸಲಾಗುತ್ತಿದ್ದು, ದೃಶ್ಯ ಮಾಧ್ಯಮಗಳ ಸೌಲಭ್ಯಗಳನ್ನು ಸಹ ಒದಗಿಸಲಾಗುತ್ತಿದೆ.<br>• ಅಕ್ಟೋಬರ್ 01 ರಂದು ಪ್ರತಿ ವರ್ಷ ಹಿರಿಯ ನಾಗರಿಕರಿಗಾಗಿ ಇಲಾಖಾ ವತಿಯಿಂದ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಆಚರಿಸಲಾಗುವುದು. ಈ ಕಾರ್ಯಕ್ರಮದ ಸಂದರ್ಭದಲ್ಲಿ ರಾಜ್ಯದಲ್ಲಿನ ಹಿರಿಯ ನಾಗರಿಕರಿಗೆ ಕ್ರೀಡೆ/ಸಾಂಸ್ಕೃತಿಕ ಸ್ಪರ್ಧೆಗಳನ್ನು ಇಲಾಖಾ ವತಿಯಿಂದ ಜಿಲ್ಲಾ ಹಾಗೂ ರಾಜ್ಯ ಮಟ್ಟಗಳಲ್ಲಿ ಆಯೋಜಿಸಲಾಗುವುದು.<br>• ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ವಿಶ್ವ ಹಿರಿಯ ನಾಗರಿಕರ ದಿನದಂದು ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. |

**ಸಂಖ್ಯೆ:ಮಮಇ 198 ಪಿಹೆಚ್‌ಪಿ 2021**

Halappa BA

(ಹಾಲಪ್ಪ ಆಚಾರ್)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಅನುಬಂಧ-01

## ಹಿರಿಯ ನಾಗರಿಕರಿಗಾಗಿ ರಾಜ್ಯ ಸರ್ಕಾರದಿಂದ ಜಾರಿಗೊಳಿಸುತ್ತಿರುವ ಯೋಜನೆಗಳು

### ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಜಾರಿಗೊಳಿಸುತ್ತಿರುವ ಯೋಜನೆಗಳು

**1. ಹಗಲು ಯೋಗಕ್ಷೇಮ ಕೇಂದ್ರಗಳು:**

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

**2. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:**

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

**3. ಹಿರಿಯ ನಾಗರಿಕರ ವೃದ್ಧಾಶ್ರಮ:**

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು, ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 9 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

**4. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರು ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿನಾಂಕ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

**5. ಕರ್ನಾಟಕ ರಾಜ್ಯ ಸಾರಿಗೆ ನಿಗಮದ ವತಿಯಿಂದ ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ ಯೋಜನೆ:**

ರಾಜ್ಯ ಸಾರಿಗೆ ಹಾಗೂ ನಗರ ಸಾರಿಗೆ ಬಸ್‌ಗಳಲ್ಲಿ 60 ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ. ಈ ಯೋಜನೆಯ ಪ್ರಯೋಜನ ಪಡೆಯಲು ಹಿರಿಯ ನಾಗರಿಕರು ಇಲಾಖೆ ವತಿಯಿಂದ ನೀಡಲಾಗುವ ಗುರುತಿನ ಚೀಟಿ, ಚುನಾವಣಾ ಗುರುತಿನ ಚೀಟಿ, ಚಾಲನಾ ಪರವಾನಗಿ ಇವುಗಳಲ್ಲಿ ಯಾವುದಾದರೊಂದನ್ನು ಇಲ್ಲವೆ ಕೆ.ಎಸ್.ಆರ್.ಟಿ.ಸಿ.ಯಿಂದ ವಿತರಿಸಲಾದ ಗುರುತಿನ ಚೀಟಿ ಇವುಗಳನ್ನು ತೋರಿಸಬೇಕಾಗುತ್ತದೆ.

**6. ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಇಲಾಖೆಯ ಮುಖಾಂತರ ಹಿರಿಯ ನಾಗರಿಕರಿಗೆ ಪಿಂಚಣಿ ಯೋಜನೆ:**

ಬಡತನ ರೇಖೆಗಿಂತ ಕೆಳಗಿನ ಹಿರಿಯ ನಾಗರಿಕರಿಗೆ ಪಿಂಚಣಿ ಯೋಜನೆಯನ್ನು ಸಹ ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಯಡಿ 60 ರಿಂದ 64 ವರ್ಷದ ವೃದ್ಧರಿಗೆ ಮಾಹೆಯಾನ ರೂ.600/- ಹಾಗೂ 65 ವರ್ಷ ಮೇಲ್ಪಟ್ಟ ವೃದ್ಧರಿಗೆ ರೂ.1200/- ರಂತೆ ಮಾಸಾಶನವನ್ನು ನೀಡಲಾಗುತ್ತದೆ.

<u>ಅನುಬಂಧ–2</u>

ರಾಜ್ಯದಲ್ಲಿರುವ ವೃದ್ಧಾಶ್ರಮಗಳ ಮಾಹಿತಿ

| ಕ್ರಸಂ | ಜಿಲ್ಲೆಯ ಹೆಸರು | ರಾಜ್ಯ ಸರ್ಕಾರದ ಅನುದಾನಿತ ವೃದ್ಧಾಶ್ರಮಗಳು | ಕಂದಾಯ ಉಪ ವಿಭಾಗದಲ್ಲಿನ ವೃದ್ಧಾಶ್ರಮಗಳು | ಕೇಂದ್ರ ಸರ್ಕಾರದ ಅನುದಾನಿತ ವೃದ್ಧಾಶ್ರಮಗಳು | ಷರಾ<br>ಉಪ ವಿಭಾಗಗಳ ವಿವರ |
|---|---|---|---|---|---|
| 1 | ಬೆಂಗಳೂರು ನಗರ | 2 | 0 | 3 | – |
| 2 | ಬೆಂಗಳೂರು ಗ್ರಾ | 0 | 0 | 1 | – |
| 3 | ಬೆಳಗಾವಿ | 1 | 0 | 1 | – |
| 4 | ಬಳ್ಳಾರಿ | 1 | 0 | 2 | – |
| 5 | ಬೀದರ್ | 1 | 1 | 3 | ಬೀದರ್ ಉಪ ವಿಭಾಗ |
| 6 | ವಿಜಯಪುರ | 1 | 0 | 1 | – |
| 7 | ಬಾಗಲಕೋಟೆ | 1 | 0 | 1 | – |
| 8 | ಚಿತ್ರದುರ್ಗ | 1 | 0 | 2 | – |
| 9 | ಚಿಕ್ಕಮಗಳೂರು | 1 | 0 | 1 | – |
| 10 | ಚಾಮರಾಜನಗರ | 1 | 0 | 1 | – |
| 11 | ಧಾರವಾಡ | 1 | 0 | 1 | – |
| 12 | ದಕ್ಷಿಣ ಕನ್ನಡ | 1 | 0 | 0 | – |
| 13 | ದಾವಣಗೆರೆ | 0 | 0 | 5 | – |
| 14 | ಕಲಬುರಗಿ | 1 | 0 | 1 | – |
| 15 | ಗದಗ | 1 | 1 | 1 | ಗದಗ ಉಪ ವಿಭಾಗ |
| 16 | ಹಾವೇರಿ | 1 | 0 | 1 | – |
| 17 | ಹಾಸನ | 1 | 2 | 1 | ಹಾಸನ ಮತ್ತು ಸಕಲೇಶಪುರ ಉಪ ವಿಭಾಗ |
| 18 | ಕೊಡಗು | 1 | 0 | 1 | – |
| 19 | ಕೋಲಾರ | 1 | 0 | 1 | – |
| 20 | ಕೊಪ್ಪಳ | 1 | 0 | 2 | – |
| 21 | ಮೈಸೂರು | 1 | 2 | 1 | ಮೈಸೂರು ಮತ್ತು ಹುಣಸೂರು ಉಪ ವಿಭಾಗ |
| 22 | ಮಂಡ್ಯ | 1 | 0 | 2 | – |
| 23 | ರಾಯಚೂರು | 0 | 0 | 2 | – |
| 24 | ಶಿವಮೊಗ್ಗ | 1 | 2 | 3 | ಶಿವಮೊಗ್ಗ ಮತ್ತು ಸಾಗರ ಉಪ ವಿಭಾಗ |
| 25 | ತುಮಕೂರು | 1 | 1 | 3 | ತುಮಕೂರು ಉಪ ವಿಭಾಗ |
| 26 | ಉತ್ತರ ಕನ್ನಡ | 0 | 0 | 2 | |
| 27 | ಉಡುಪಿ | 0 | 0 | 0 | |
| 28 | ರಾಮನಗರ | 1 | 0 | 0 | |
| 29 | ಚಿಕ್ಕಬಳ್ಳಾಪುರ | 1 | 0 | 3 | |
| 30 | ಯಾದಗಿರಿ | 1 | 0 | 3 | |
| | | **26** | **9** | **49** | |
| ರಾಜ್ಯದಲ್ಲಿನ ಒಟ್ಟು ವೃದ್ಧಾಶ್ರಮಗಳು | | 84 | | | |